ಮೈಸೂರು ಡಿಸ್ಟ್ರಿಕ್ಟ್.

ತಾರೀಖು 17ನೆ ಜುಲೈ 1907.

ಸ್ಥಿರಸ್ವತ್ತಿನ ಹರಾಜಿ ಬಗ್ಗೆ ಕೊಡಲ್ಪಟ್ಟ ಇಸ್ತಿಹಾರ್ ವ ಪ್ರಸಿದ್ಧಪತ್ರಿಕೆ.

1. ಕಂದಾಯದ ಬಾಕೀದಾರರಾದ ಹಿಟ್ನೆ ಹೆಬ್ಬಾಗಿಲು ಗ್ರಾಮದ ದಿಡ್ಡೆ ನರಸಿಂಹ ಉಪಾಧ್ಯೆರು ವಗೈರೇರಿಂದ ಬರಬೇಕಾದ ಜಮ್ಮಿ ಕಂದಾಯದ ಬಾಕೀಗಾಗಿ ಇದರಡಿ ನಮೂದಾಗುವ ಸ್ಥಿರಸ್ವತ್ತು ಮೈಸೂರು ಡಿಸ್ಟ್ರಿಕ್ಟು ಹುಣಸೂರು ತಾಲ್ಲೂಕು ಕಛೇರಿಯಲ್ಲಿ 1907ನೆ ಇಸವಿ ಸೆಪ್ಟೆಂಬರ್ 2ನೆ ತಾರೀಖಿನಲ್ಲಿ ಬಹಿರಂಗವಾದ ಹರಾಜು ಮಾಡಲ್ಪಡುತ್ತೆಂದು ಇದರಿಂದ ಪ್ರಸಿದ್ಧಪಡಿಸಲ್ಪಟ್ಟು ಇದೆ.

ಹರಾಜು ಹಗಲು 11 ಘಂಟೆಗೆ ಉಪಕ್ರಮಿಸಲ್ಪಡುತ್ತೆ. ಸ್ವತ್ತು ಏಕದಂ ಛಡ ದರಖಾಸ್ತುದಾರನ ಹೆಸರಿಗೆ ನಿಲ್ಲಿಸಲ್ಪಡುತ್ತೆ.

2. ಸದರೀ ಸ್ವತ್ತಿಗಾಗಿ ಹರಾಜುದಾರನು 1906-07ನೆ ಸಾಲಿಗೆ ಪೂರ್ತಿಯಾಗಿ ಪಾವತಿ ಮಾಡಬೇಕಾದ ಕಂದಾಯದ ಮೊಬಲಗು ಇದರಡಿ ಕಾಣಿಸಿರುವ ತಪ್ಶೆಯಲ್ಲಿ ನಮೂದಿಸಿರುವ ತಪಸೀಲ್ ಮೇರಿಗೆ ರೂಪಾಯಿ 841—0—7 ಆಗಿರುತ್ತೆ.

2. ಹರಾಜು ಕಾಲದಲ್ಲಿ ಹರಾಜುದಾರನು ಹರಾಜ್ ಮೊಬಲಗಿನ ಶೇಕಡಾ 25 ರೂಪಾಯಿಗಳನ್ನು ಡಿಪಾಜಿಟ್ಟು ಹಾಜರ್ಮಾಡಬೇಕಾಗಿರುತ್ತೆ. ಅದು ಜಾತಾ ಹರಾಜು ಬಾಬತು ಬಾಕೀ ಮೊಬಲಗು ಹರಾಜ್ ತಾರೀಖು ಲಾಗಾಯಿತು 15 ದಿವಸಗಳಲ್ಲಿ ಪಾವತಿ ಮಾಡಲ್ಪಡದೇ ಹೋದಲ್ಲಿ ಮೇಲೆ ಹೇಳಿದ ಡಿಪಾಜಿಟ್ಟು ಮೊಬಲಗನ್ನು ಹಾಜರ್ಮಾಡಿದವನು ಕಳದುಕೊಳ್ಳಲು ಗುರಿಯಾಗುತ್ತಾನೆ.

4. ಅಂಥಾ ಡಿಪಾಜಿಟ್ಟು ಮೊಬಲಗು ಹಾಜರ್ಮಾಡಲ್ಪಡದೆ ಯಾ ಹರಾಜು ಬಾಬತು ಬಾಕೀ ಮೊಬಲಗು ಪಾವತಿ ಮಾಡಲ್ಪಡದೆ ಹೋದಾಗ್ಯೆ ಸದರೀ ಸ್ವತ್ತು ಮೊದಲು ಹರಾಜುದಾರನ ಖರ್ಚಿನಿಂದಲೂ ಮತ್ತು ಅವನಿಗೆ ಅದರಿಂದ ಉಂಟಾಗಬಹುದಾದ ನಷ್ಟಕ್ಕೆ ಗುರಿಪಡಿಸಿಯೂ ಪುನಃ ಹರಾಜು ಮಾಡಲ್ಪಡುತ್ತೆ.

5. ಹರಾಜಿನಲ್ಲಿ ಸ್ವತ್ತು ಯಾರ ಹೆಸರಿಗಾವರೂ ನಿಲ್ಲಿಸಲ್ಪಡುವದಕ್ಕೆ ಮುಂಚಿತವಾಗಿ ಬಾಕೀದಾರನಾಗಲೀ ಆತನ ತರಫುವನಾಗಿ ಪ್ರವರ್ತಿಸುವ ಯಾ ಸದರೀ ಸ್ವತ್ತಿನಲ್ಲಿ ಬಾಧ್ಯತೆ ಇರುತ್ತೆಂದು ಹೇಳುವ ಯಾವ ಇತರ ಮನುಷ್ಯನೇ ಆಗಲೀ ಬಾಕಿಯಲ್ಲಿ ಬಂದಿರುವ ಪೂರಾ ಕಂದಾಯದ ಹಣವನ್ನೂ, ಬಡ್ಡಿ ಮತ್ತು ಇತರ ಖರ್ಚುಗಳ ಸಮೇತ ಹಾಜರ್ಮಾಡುವ ಪಕ್ಷಕ್ಕೆ ಹರಾಜು ನಿಲ್ಲಿಸಲ್ಪಡುತ್ತೆ.

6. ಹರಾಜು ಡೆಪ್ಯೂಟಿ ಕಮಿಷನರವರಿಂದಾಗಲಿ ಯಾ ಈ ಭಾಗದಲ್ಲಿ ಅಧಿಕಾರವನ್ನು ಹೊಂದಿದ ಇತರ ಅಧಿಕಾರಿಯಿಂದಾಗಲಿ ಮುಂಜಾರ್ಮಾಡಲ್ಪಡುವ ತನಕ ಸ್ವತ್ತಿನ ಹರಾಜು ಪೂರ್ತಿಯಾಗುವದಿಲ್ಲ.

7. ಹರಾಜಿನಲ್ಲಿ ತೆಗದುಕೊಂಡವರು ಹರಾಜ್ ಮೊಬಲಗನ್ನು ಪೂರ್ತಿಯಾಗಿ ಪಾವತಿ ಮಾಡಿದಮೇಲೆ ಡೆಪ್ಯೂಟಿ ಕಮಿಷನರವರಿಂದ ಹರಾಜು ಮುಂಜಾರ್ಮಾಡಲ್ಪಟ್ಟ ಕೂಡ್ಲೆ ಹರಾಜುದಾರರು ಸದರೀ ಸ್ವತ್ತಿನ ಸ್ವಾಧೀನವನ್ನು ಹೊಂದುವರು. ಮತ್ತು ಸದರೀ ಸ್ವತ್ತು ಹರಾಜುದಾರನ ಹೆಸರಿನಲ್ಲಿ ರಿಜಿಸ್ಟರ್ ಮಾಡಲ್ಪಟ್ಟು ಡೆಪ್ಯೂಟಿ ಕಮಿಷನರವರಿಂದ ಸೈ ಮೊಹರ್ ಮಾಡಲ್ಪಟ್ಟ ಒಂದು ಹರಾಜ್ ಸರಟಿಫಿಕೇಟ್ ಆತನಿಗೆ ಕೊಡಲ್ಪಡುವದು. ಸ್ವತ್ತಿನ ವಿವರಣೆಯಲ್ಲಿಯೂ ಯಾ ವಿಸ್ತೀರ್ಣದಲ್ಲಿಯೂ ಇರುವ ಸ್ಖಲಿತ್ಯಗಳಿಗೆ ಗವರ್ಮೆಂಟಿನವರು ಜವಾಬ್ದಾರರಲ್ಲವೆಂಬ ಅಂಶವನ್ನು ಸ್ಪಷ್ಟವಾಗಿ ತಿಳಿದಿರತಕ್ಕದ್ದು.

8. ಹರಾಜಿನಿಂದ ತಮಿಗೆ ನಷ್ಟ ಉಂಟಾಯಿತೆಂದು ಎಣಿಸುವ ಜನಗಳು ಹರಾಜು ತಾರೀಖು ಲಾಗಾಯಿತು 30 ದಿವಸಗಳಲ್ಲಿ ಡೆಪ್ಯೂಟಿ ಕಮಿಷನರವರಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಮತ್ತು ಅವರ ಹುಕುಮಿನ ಮೇಲೆ ಕಾನೂನಿನಿಂದ ವಿಧಿಸಲ್ಪಟ್ಟ ವಾಯಿದೆಯಲ್ಲಿ ಮೇಲ್ಪಟ್ಟ ಅಧಿಕಾರಿಗಳಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಸ್ವತಂತ್ರರಾಗಿರುತ್ತಾರೆ. ಸ್ವತ್ತಿನ ವಿಕ್ರಯವು ಅಂಥಾ ಅಪ್ಪೀಲಿನಲ್ಲಿ ಆಗುವ ಫೈಸಲ್ ಹುಕುಮಿಗೆ ಬದ್ಧವಾಗಿರತಕ್ಕದ್ದು:—

ತಾಲ್ಲೂಕು.	ಹೋಬಳಿ	ಗ್ರಾಮ	ಬಾಕೀದಾರರ ಹೆಸರು.	ಸ್ವತ್ತಿನ ತಪ್ಶೀಲ್. ಹಕ್ಕುಪಡಗಳು. ಕಟ್ಟಡಗಳು. ಕಟ್ಟಡದ ಹೆಸರು	ಅಂದಾಜು ಕಿಮ್ಮತ್ತು.	ಜಮೀನು. ನಂಬರು ಅಥವಾ ಜಮೀನಿನ ಹೆಸರು	ಮುಸ್ತಿ ತರಿ ಯಾ ಬಾಗಾಯ್ತು	ವಿಸ್ತೀರ್ಣ	ಆಕಾರ	ಅಂದಾಜು ಕಿಮ್ಮತ್ತು.	ಸರಕಾರಿಕ್ಕೆ ಸಲಿಯಬೇಕಾದ ಜಮೀನಾ ಕೊಡಬೇಕಾದ ಯಂ ಕಾಯಂ ಗುತ್ತಾ ಮೊಬಲಗು.	ಸರಕಾರಿಕ್ಕೆ ಬರಬೇಕಾದ ಕೋಟೆ ಪೀ ವಗೈರೆ ಸಹಿತವಾದ ಬಾಕಿ ಮೊಬಲಗು.
ಹುಣಸೂರು	ಪಿರಿಯಪಟ್ಟಣ	ಜೋಡಿ ಹಿಪ್ಪೆ ಹೆಬ್ಬಾಗಿಲು	ದಿಡ್ಡೆ ನರಸಿಂಹ ಉಪಾಧ್ಯರು ವಗೈರೆಯಿಂದ			ಪೂರ್ವಕ್ಕೆ—ಸಂನ್ಯಾಸಪ್ಪರ. ಪಶ್ಚಿಮಕ್ಕೆ—ಅವರೆಕಾಯಿ ಗುಡ್ಡದಕಾವಲು. ದಕ್ಷಿಣಕ್ಕೆ—ಕಗ್ಗುಂಡಿ ಗ್ರಾಮ. ಉತ್ತರಕ್ಕೆ—ಹಿಟ್ನೆ ಹಳ್ಳಿ ಗ್ರಾಮ.				ರೂ. ಆ. ಪೈ. 18 2 4 ಕುಭಕೃತು. 136 14 5 ಕೋಭಕೃತು 171 1 11 ಕೊಂಥಿ 171 1 11 ವಿಶ್ವಾವಸು 342 4 0 ಪರಾಭವ	
						ಈ ಮಧ್ಯೆ—ಖುಷ್ಕ ...		ಎ. ಗು. 552 32	ರೂ. ಆ. 375 8			
						ತರಿ ...		35 3	125 0			
						ಬಾಗಾಯ್ತು ...		69 5	280 0			
						...		487 39	7 8			
								1,144 39	788 0			

ಸಾಲೀಪೂನಾ ಸರ್ಕಾರಕ್ಕೆ ಗ್ರಾಮದಿಂದ ಬರಬೇಕಾದ್ದು.

ಜೋಡಿ.	ಕ್ವಿಟ್‌ರೆಂಟು.	ಲೋಕಲ್.	ಜುಮ್ಮಾ
ರೂ.	ರೂ.	ರೂ. ಆ.	ರೂ. ಆ.
222	71	49 4	342 4

ಎ. ಸುಬ್ರಹ್ಮಣ್ಯ ಐಯ್ಯರ್, ಫಾರ್ ಡೆಪ್ಯೂಟಿ ಕಮಿಷನರ್.